**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 241 ಜಿಪಸ 2014

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:19-05-2015

**ಅಧಿಕೃತ ಜ್ಞಾಪನ**

**ವಿಷಯ:** ಪ್ರಾದೇಶಿಕ ತರಬೇತಿ ಕೇಂದ್ರ ಕಟ್ಟಡವನ್ನು ನಿರ್ಮಿಸುವ ಕಾಮಗಾರಿ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಉಲ್ಲೇಖ:** ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು ಇವರ ಪತ್ರ ಸಂಖ್ಯೆ: ರಾಗ್ರಾಸಂ. ಕಟ್ಟಡ.ಸಿಆರ್-11/2014-15, ದಿನಾಂಕ: 17-03-2015.

****

**ಪ್ರಸ್ತಾವನೆ:**

ಪಂಚಾಯತ್ ರಾಜ್ ವ್ಯವಸ್ಥೆಯನ್ನು ಸದೃಢ ಹಾಗೂ ಸಬಲೀಕರಣಕ್ಕಾಗಿ ಚುನಾಯಿತ ಪ್ರತಿನಿಧಿಗಳಿಗೆ ಸ್ಥಳೀಯ ಅವಶ್ಯಕತೆ, ಮೂಲಭೂತ ಸೌಲಭ್ಯ ಮತ್ತು ಅಭಿವೃದ್ಧಿ ವಿಷಯಗಳಿಗೆ ಸಂಬಂಧಿಸಿದಂತೆ ವಿಚಾರ ಧಾರೆಗಳನ್ನು ವೃದ್ಧಿಸುವುದು ಹಾಗೂ ಸಾಂಸ್ಥಿಕ ಆಡಳಿತದಲ್ಲಿ ಭಾಗವಹಿಸಲು ಸಾಮರ್ಥ್ಯಾಭಿವೃದ್ಧಿ ತರಬೇತಿಯನ್ನು ನೀಡುವುದು ಅತ್ಯವಶ್ಯಕವಾಗಿದೆ. ಪ್ರಾದೇಶಿಕವಾಗಿ ತರಬೇತಿ ನೀಡುವ ಹಾಗೂ ಗ್ರಾಮೀಣಾಭಿವೃದ್ಧಿಗೆ ಪೂರಕವಾಗಿ ಸಂಶೋಧನೆಗಳನ್ನು ನಡೆಸುವ ಉದ್ದೇಶದಿಂದ ಪ್ರಾದೇಶಿಕ ತರಬೇತಿ ಕೇಂದ್ರವನ್ನು ಕಲಬುರಗಿ ಜಿಲ್ಲೆಯ ಕೆಸರಟಗಿ ಎಂಬಲ್ಲಿ ಸ್ಥಾಪಿಸಲು ನಿರ್ಧರಿಸಲಾಗಿದೆ. ಹೊಸ ಪ್ರಾದೇಶಿಕ ತರಬೇತಿ ಕೇಂದ್ರ ಕಟ್ಟಡ ನಿರ್ಮಿಸಲು ಕಾಮಗಾರಿ ಅಂದಾಜು ಪಟ್ಟಿಯನ್ನು ರೂ. 705.00 ಲಕ್ಷಗಳಿಗೆ ತಯಾರಿಸಿ, ಆಡಳಿತ್ಮಾಕ ಅನುಮೋದನೆ ನೀಡಲು ಕೋರಿ ಉಲ್ಲೇಖಿತ ಪತ್ರದಲ್ಲಿ ಪ್ರಸ್ತಾವನೆ ಸಲ್ಲಿಸಿರುವ ಹಿನ್ನೆಲೆಯಲ್ಲಿ ಈ ಕೆಳಕಂಡ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿರುವುದರಿಂದ ಈ ಕೆಳಕಂಡ ಆದೇಶ.

| ಕ್ರ.ಸಂ | ಕಾಮಗಾರಿಗಳ ವಿವರ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಕಲಬುರಗಿ ಜಿಲ್ಲೆಯ ಕೆಸರಟಗಿ ಎಂಬಲ್ಲಿ ಪ್ರಾದೇಶಿಕ ತರಬೇತಿ ಕೇಂದ್ರ ಕಟ್ಟಡದ ನಿರ್ಮಾಣ | 705.00 |

**ಆದೇಶ:**

ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಪರಿಶೀಲಿಸಿ, ಕಲಬುರಗಿ ಜಿಲ್ಲೆಯ ಕೆಸರಟಗಿ ಎಂಬಲ್ಲಿ ಪ್ರಾದೇಶಿಕ ತರಬೇತಿ ಕೇಂದ್ರ ಕಟ್ಟಡವನ್ನು ನಿರ್ಮಿಸಲು ಅಂದಾಜು ಪಟ್ಟಿಗೆ ರೂ. 705.00 ಲಕ್ಷಗಳಿಗೆ ಅನುದಾನದ ಲಭ್ಯತೆಗೊಳಪಟ್ಟು (ಏಳು ನೂರ ಐದು ಲಕ್ಷ ರೂಪಾಯಿಗಳು ಮಾತ್ರ) ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಆಡಳಿತಾತ್ಮಕ ಅನುಮೋದನೆಯನ್ನು ನೀಡಿ ಆದೇಶಿಸಿದೆ.

**ನಿಬಂಧನೆಗಳು**

1. ಅನುದಾನವು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಿದೆಯೋ ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸುವುದು.
2. ಪ್ರಾದೇಶಿಕ ತರಬೇತಿ ಕೇಂದ್ರ ಕಟ್ಟಡದ ವಾಸ್ತು ವಿನ್ಯಾಸವು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು, ಇವರ ಸಲಹೆಯಂತೆ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮವು ಸಿದ್ಧಪಡಿಸಿರುವ ಮಾದರಿಯಲ್ಲಿರಬೇಕು.
3. ಕಾಲಮಿತಿಯಲ್ಲಿ ಕಟ್ಟಡವನ್ನು ನಿರ್ಮಿಸಬೇಕು.

4. Non-Duplication, Non-Diversion ಮತ್ತು Non-Embezzlement ಪ್ರಮಾಣ ಪತ್ರಗಳನ್ನು ಸಲ್ಲಿಸುವುದು.

5. ಅನುದಾನದ ಬಳಕೆ ಪ್ರಮಾಣ ಪತ್ರವನ್ನು ಜಿ.ಎಫ್.ಆರ್.19–ಎ ನಮೂನೆಯಲ್ಲಿ ಕಡ್ಡಾಯವಾಗಿ ಸಲ್ಲಿಸುವುದು.
6. ಈ ಕಾಮಗಾರಿಗಳ ಮಾಹಿತಿಯನ್ನು ಗಾಂಧಿ ಸಾಕ್ಷಿ ಕಾಯಕ(ವರ್ಕ್‌ಸಾಫ್ಟ್) ತಂತ್ರಾಂಶದಲ್ಲಿ ಅಳವಡಿಸುವುದು ಹಾಗೂ ಹಣ ಪಾವತಿಸುವಾಗ ವರ್ಕ್‌ಸಾಫ್ಟ್ ಮೂಲಕವೇ ಪಾವತಿಸುವುದು.

P Devasahay

(ಪಿ.ದೇವಸಹಾಯಂ)

ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)(ಜಿ.ಪಂ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

RK 19.5.15

ಪ್ರತಿಯನ್ನು:

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ಸರ್ಕಲ್, ಬೆಂಗಳೂರು.
2. ನಿರ್ದೇಶಕರು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
3. ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತಿ, ಕಲಬುರಗಿ.
4. ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತಿ, ಜಿಲ್ಲಾ ಪಂಚಾಯತಿ, ಕಲಬುರಗಿ.
5. ಕಾರ್ಯಪಾಲಕ ಇಂಜಿನೀಯರ್, ಕೆ.ಆರ್.ಐ.ಡಿ.ಎಲ್, ಕಲಬುರಗಿ.

ಪ್ರತಿಯನ್ನು ಮಾಹಿತಿಗಾಗಿ:

1. ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ನಿರ್ದೇಶಕರು (ಪಂ.ರಾಜ್–2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.